# ಬೆಳಗಾವಿ ಅಧಿವೇಶನದ ಸಿದ್ಧತೆಗೆ ಸೂಚನೆ

**ಬೆಳಗಾವಿ, ನ.8:** ಬೆಳಗಾವಿಯ ಅಧಿವೇಶನ ನಡೆಸುವ ಸಂಬಂಧ ಸಕಲ ಸಿದ್ಧತೆಗಳಿಗೆ ಸೂಚನೆ ನೀಡಲಾಗಿದೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ವಿಧಾನಮಂಡಳ ಬೆಳಗಾಲದ ಅಧಿವೇಶನ ಹಿನ್ನೆಲೆಯಲ್ಲಿ ಪೂರ್ವ ಸಿದ್ಧತೆ ಪರಿಶೀಲಿಸಿ ಅವರು ಮಾತನಾಡಿದರು.

ಈ ಬಾರಿ ಅಧಿವೇಶನದ ಕಲಾಪವನ್ನು ನೇರಪ್ರಸಾರ ಮಾಡಲು ನಿರ್ಧರಿಸಲಾಗಿದೆ. ನ.20 ರೊಳಗೆ ಎಲ್ಲ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ. ಅಧಿವೇಶನ ಸುಸೂತ್ರವಾಗಿ ನಡೆಸಲು ಎಲ್ಲ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ. ಡಿಸೆಂಬರ್‌ನಲ್ಲಿ ಅಧಿವೇಶನ ನಡೆಯುವುದು ಖಚಿತವಾಗಿದೆ. ದಿನಾಂಕವನ್ನು ಸರಕಾರ ನಿರ್ಧರಿಸಲಿದೆ. ಶಾಸಕರ ಭವನ ನಿರ್ಮಾಣ ಬಹುಜನರ ಬೇಡಿಕೆಯಾಗಿದೆ.

...ಪುಟ 2



ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಚಳಿಗಾಲ ಅಧಿವೇಶನದ ಉಭಯ ಸದನಗಳ ಕಾರ್ಯ ಕಲಾಪಗಳ ವೆಬ್ ಕಾಸ್ಟಿಂಗ್ ಮೂಲಕ ನೇರಪ್ರಸಾರ ಮಾಡುವುದಕ್ಕೆ ಸಂಬಂಧಿಸಿದಂತೆ ಇಂದು ಮಧ್ಯಾಹ್ನ ಬೆಳಗಾವಿಯ ಸುವರ್ಣ ವಿಧಾನಸೌಧದಲ್ಲಿ ಅಧಿಕಾರಿಗಳ ಸಭೆ ನಡೆಸಿ ಪರಿಶೀಲಿಸಿದರು. ಜಿಲ್ಲಾಧಿಕಾರಿಎಂ.ಜಿ.ಹಿರೇಮಠ, ಎಸ್ಪಿ ಲಕ್ಷ್ಮಣ ನಿಂಬರಗಿ, ಶಾಸಕಾಂಗ ಸಚಿವಾಲಯ ಅಧಿಕಾರಿಗಳು, ತಾಂತ್ರಿಕ ಪರಿಣಿತರು ಉಪಸ್ಥಿತರಿದ್ದರು.

ಈ ಸಂಜೆ Mon, 08 November 2021
https://epaper.eesanje.com/c/64214164

# ಬೆಳಗಾವಿ ಅಧಿವೇಶನದ ಸಿದ್ಧತೆಗೆ ಸೂಚನೆ

ಇದನ್ನು ಮುಖ್ಯಮಂತ್ರಿಗಳ ಜತೆ ಚರ್ಚಿಸಿ ಸರಕಾರದ ಗಮನಕ್ಕೆ ತರಲಾಗುವುದು. ಶಾಸಕರ ಭವನದ ನಿರ್ಮಾಣಕ್ಕೆ ಸಂಬಂಧಿಸಿದಂತೆ ಸಾಧಕ-ಬಾಧಕಗಳನ್ನು ಚರ್ಚಿಸಿ ಸರಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ. ಸುವರ್ಣ ವಿಧಾನಸೌಧವನ್ನು ನಿರ್ಮಿಸಿ ಪ್ರತಿವರ್ಷ ಅಧಿವೇಶನ ನಡೆಸುವುದರಿಂದ ಶಾಸಕರ ಭವನ ನಿರ್ಮಿಸುವುದು ಸೂಕ್ತ ಎಂಬುದು ನನ್ನ ಅಭಿಪ್ರಾಯವಾಗಿದೆ ಎಂದು ಹೇಳಿದರು.

ಅಧಿವೇಶನ ನಡೆಸುವಾಗ ಕಚೇರಿಗಳ ಕೆಲಸಕಾರ್ಯಗಳು ಸುಗಮವಾಗಿ ನಡೆಸಲು ಅನುಕೂಲವಾಗುವಂತೆ ಪರಿಶೀಲಿಸಲಾಗುತ್ತಿದೆ. ಸುವರ್ಣ ವಿಧಾನಸೌಧಕ್ಕೆ ವಿವಿಧ ಇಲಾಖೆಗಳ ರಾಜ್ಯಮಟ್ಟದ ಕಚೇರಿಗಳನ್ನು ಸ್ಥಳಾಂತರಿಸುವುದು ಸೂಕ್ತ. ಅಧಿವೇಶನದಲ್ಲಿ ಯಾವುದೇ ರೀತಿಯ ತೊಂದರೆಯಾಗದಂತೆ ಎಚ್ಚರಿಕೆ ವಹಿಸಲಾಗುವುದು. ಶಾಸಕರ ಹಾಜರಾತಿ ಕಡ್ಡಾಯಗೊಳಿಸಲು ಅವಕಾಶಗಳಿರುವುದಿಲ್ಲ, ಆದರೆ ಬೆಳಗಾವಿ ಅಧಿವೇಶನದ ಕಲಾಪಗಳಲ್ಲಿ ಶಾಸಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ ಎಂದರು.

ಪ್ರಶ್ನೋತ್ತರ, ಶೂನ್ಯ ವೇಳೆ, ಗಮನಸೆಳೆಯುವ ಸೂಚನೆ ಸೇರಿದಂತೆ ತುರ್ತು ವಿಷಯಗಳ ಚರ್ಚೆಗೆ ನಿಯಮಾವಳಿ ಪ್ರಕಾರ ಅವಕಾಶವನ್ನು ಕಲ್ಪಿಸಲಾಗುವುದು. ಆಯಾ ದಿನದ ವಿಷಯಸೂಚಿಯ ಪ್ರಕಾರ ಕಲಾಪವನ್ನು ನಡೆಸಲಾಗುವುದು. ಈ ಬಾರಿಯ ಅಧಿವೇಶನದಲ್ಲಿ ಉತ್ತರ ಕರ್ನಾಟಕದ ಸಮಸ್ಯೆಗಳ ಚರ್ಚೆಗೆ ಆದ್ಯತೆ ನೀಡಲಾಗುವುದು ಎಂದು ಹೇಳಿದರು.

ಈ ಸಂಜೆ Mon, 08 November 2021
https://epaper.eesanje.com/c/64214223